ಕರ್ನಾಟಕ ಸರ್ಕಾರ

ಜನವರಿ 30, 2017

## ಬರ ಪರಿಸ್ಥಿತಿ ನಿಭಾಯಿಸಲು ಸಮರೋಪಾದಿಯಲ್ಲಿ ಕಾರ್ಯ ನಿರ್ವಹಿಸಿ, ಲೋಪ-ದೋಷಗಳಿಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು : ಅಧಿಕಾರಿಗಳಿಗೆ ಮುಖ್ಯಮಂತ್ರಿ ಎಚ್ಚರಿಕೆ



**ಬೆಂಗಳೂರು, ಜನವರಿ 30:**

ರಾಜ್ಯದಲ್ಲಿ ಎದುರಾಗಿರುವ ಭೀಕರ ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಹಾಗೂ ಸಮರ್ಪಕವಾಗಿ ನಿಭಾಯಿಸಲು ಸಮರೋಪಾದಿಯಲ್ಲಿ ಕಾರ್ಯ ನಿರ್ವಹಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬರ ಪರಿಹಾರ ಕಾಮಗಾರಿಗಳ ಅನುಷ್ಠಾನದಲ್ಲಿ ಯಾವುದೇ ಲೋಪ-ದೋಷಗಳು ಕಂಡು ಬಂದಲ್ಲಿ ಸಂಬಂಧಿತ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಇಲ್ಲಿ ಇಂದು ಎಚ್ಚರಿಸಿದರು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಎರಡು ದಿನಗಳ ಸಮ್ಮೇಳನವನ್ನು ಉದ್ದೇಶಿಸಿ ಅವರು ಮಾತನಾಡುತ್ತಿದ್ದರು.

ರಾಜ್ಯದಲ್ಲಿ ಮುಂಗಾರು ಹಂಗಾಮಿನಲ್ಲಿ 139 ತಾಲ್ಲೂಕುಗಳು ಹಾಗೂ ಹಿಂಗಾರು ಹಂಗಾಮಿನಲ್ಲಿ 160 ತಾಲ್ಲೂಕುಗಳು ಭೀಕರ ಬರಕ್ಕೆ ತುತ್ತಾಗಿವೆ. ಅಲ್ಲದೆ, ಮುಂಗಾರಿನಲ್ಲಿ ಶೇಕಡಾ 18 ರಷ್ಟು ಹಾಗೂ ಹಿಂಗಾರಿನಲ್ಲಿ ಶೇಕಡಾ 68 ರಷ್ಟು ಮಳೆ ಕೊರತೆ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಡಳಿತಗಳು ಸಮರೋಪಾದಿಯಲ್ಲಿ ಪರಿಹಾರ ಕಾಮಗಾರಿಗಳನ್ನು ಜಾರಿಗೊಳಿಸಬೇಕು. ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸುವತ್ತ, ಜನರಿಗೆ ಉದ್ಯೋಗ

ಹಾಗೂ ಜಾನುವಾರುಗಳಿಗೆ ಮೇವು ದೊರಕಿಸಿಕೊಡುವತ್ತ ತುರ್ತು ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅವರು ಸಲಹೆ ಮಾಡಿದರು.

## 25,000 ಕೋಟಿ ರೂ ನಷ್ಟ

ಕಳೆದ ಆರು ವರ್ಷಗಳಿಂದಲೂ ರಾಜ್ಯದಲ್ಲಿ ಬರಗಾಲವಿದೆ. ಅದರಲ್ಲಿಯೂ ಕಳೆದ ವರ್ಷ ಹಾಗೂ ಈ ವರ್ಷ ರಾಜ್ಯದಲ್ಲಿ ಬರದ ತೀವ್ರತೆ ಅತ್ಯಂತ ಕೆಟ್ಟದಾಗಿದೆ. ರಾಜ್ಯದಲ್ಲಿನ ಒಟ್ಟಾರೆ 176 ತಾಲ್ಲೂಕುಗಳ ಪೈಕಿ ಮುಂಗಾರು ವೈಫಲ್ಯದಿಂದ 139 ತಾಲ್ಲೂಕುಗಳು ಭೀಕರ ಬರ ಎದುರಿಸುತ್ತಿವೆ. ಅಂತೆಯೇ, ಹಿಂಗಾರು ವೈಫಲ್ಯದಿಂದ 160 ತಾಲ್ಲೂಕುಗಳು ಬರದ ಬವಣೆಯಿಂದ ಬಸವಳಿದಿದೆ. ಬರದ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಒಟ್ಟಾರೆ 25,000 ಕೋಟಿ ರೂ ಗಳಿಗೂ ಹೆಚ್ಚು ಮೌಲ್ಯದ ಬೆಳೆ ನಷ್ಟ ಉಂಟಾಗಿದೆ. ಆಲಮಟ್ಟಿ, ನಾರಾಯಣಪುರ, ಘಟಪ್ರಭ ಹೊರತುಪಡಿಸಿ ಉಳಿದೆಲ್ಲಾ ಜಲಾಶಯಗಳಲ್ಲಿನ ನೀರಿನ ಸಂಗ್ರಹಣಾ ಪ್ರಮಾಣದಲ್ಲಿ ಭಾರೀ ಕುಸಿತ ಉಂಟಾಗಿದೆ. ಇದರಿಂದ ಕುಡಿಯುವ ನೀರಿನ ಸಮಸ್ಯೆ ಉಲ್ಬಣಗೊಂಡಿದೆ ಎಂದು ಅವರು ವಿವರಿಸಿದರು.

## ಸ್ಪಷ್ಟೀಕರಣ ನೀಡಿ

ಕಳೆದ 2015–16 ನೇ ಸಾಲಿನಲ್ಲಿ ಮುಂಗಾರು ಬೆಳೆ ನಷ್ಟಕ್ಕೆ 32.99 ಲಕ್ಷ ರೈತರಿಗೆ 1540 ಕೋಟಿ ರೂ ಇನ್‌ಪುಟ್ ಸಬ್ಸಿಡಿ ಬಿಡುಗಡೆ ಮಾಡಲಾಗಿದೆ. ಅದೇ ರೀತಿ ಹಿಂಗಾರು ಹಂಗಾಮಿನಲ್ಲಿ 14.63 ಲಕ್ಷ ರೈತರಿಗೆ 606.97 ಕೋಟಿ ರೂ ಸಹಾಯ ಧನವನ್ನು ಬಿಡುಗಡೆ ಮಾಡಲಾಗಿದೆ. ರಾಜ್ಯದಲ್ಲಿ ಮುಂಗಾರು ವೈಫಲ್ಯದ ಹಿನ್ನೆಲೆಯಲ್ಲಿ ಪರಿಹಾರ ಕೋರಿ 4702 ಕೋಟಿ ರೂ ಮನವಿ ಸಲ್ಲಿಸಲಾಗಿದೆ. ರಾಜ್ಯಕ್ಕೆ ಭೇಟಿ ನೀಡಿ ಪರಿಶೀಲಿಸಿದ ಕೇಂದ್ರ ತಂಡ ಗೃಹ ಮಂತ್ರಾಲಯದ ವಿಪತ್ತು ನಿರ್ವಹಣಾ ಕೋಶಕ್ಕೆ ಈಗಾಗಲೇ ತನ್ನ ವರದಿ ಸಲ್ಲಿಸಿದೆ. ಕೇಂದ್ರ ಸರ್ಕಾರವು 1782.44 ಕೋಟಿ ರೂ ಅನುದಾನ ಬಿಡುಗಡೆ ಮಾಡುವುದಾಗಿ ಪ್ರಕಟಿಸಿದೆ. ಆದರೆ, ಈವರೆಗೂ ಯಾವುದೇ ಅನುದಾನ ರಾಜ್ಯ ಸರ್ಕಾರಕ್ಕೆ ಬಂದಿಲ್ಲ. ಆದರೆ, ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗಿರುವುದಕ್ಕೆ ಚಕಾರ ಎತ್ತದ ಪ್ರತಿಪಕ್ಷಗಳು ಈ ಹಿಂದೆ ಬಿಡುಗಡೆಯಾದ ಅನುದಾನವೇ ಬಳಕೆಯಾಗಿಲ್ಲ ಎಂದು ಅಪಪ್ರಚಾರ ಮಾಡುತ್ತಿದ್ದಾರೆ. ಈ ಬಗ್ಗೆ ಅಧಿಕಾರಿಗಳು ಸ್ಪಷ್ಟೀಕರಣ ನೀಡದೆ ಮೌನ ವಹಿಸುತ್ತಿರುವುದೇಕೆ ? ಎಂದು ಅಧಿಕಾರಿಗಳನ್ನು ಪ್ರಶ್ನಿಸಿದ ಮುಖ್ಯಮಂತ್ರಿಯವರು ಕೂಡಲೇ ಸ್ಪಷ್ಟೀಕರಣ ನೀಡಿ ಎಂದರು.

## ಸನ್ನದ್ಧರಾಗಿರಿ

ಅಲ್ಲದೆ, ಕೇಂದ್ರದಿಂದ ಅನುದಾನ ಬಿಡುಗಡೆಯಾದ ಕೂಡಲೇ ಪರಿಹಾರ ಮೊತ್ತವನ್ನು ರೈತರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ತಲುಪಿಸಲು ಅಗತ್ಯ ಸಿದ್ಧತೆ ಮಾಡಿಕೊಂಡು ಸನ್ನದ್ಧರಾಗಿರಿ ಎಂದು ಸೂಚಿಸಿದ ಸಿದ್ದರಾಮಯ್ಯ ಅವರು ಕೆರೆ ಸಂಜೀವಿನಿ ಯೋಜನೆಯಡಿ ಕೆರೆಗಳ ಹೂಳೆತ್ತುವ ಕಾರ್ಯಕ್ಕೆ ಜಿಲ್ಲಾಡಳಿತ ಆದ್ಯತೆ ನೀಡಬೇಕೆಂದು ಸೂಚಿಸಿದರಲ್ಲದೆ, ಕುಡಿಯುವ ನೀರಿಗೆ ಆದ್ಯತೆ ನೀಡಬೇಕಿರುವ ಹಿನ್ನೆಲೆಯಲ್ಲಿ ಹೂಳೆತ್ತುವ ಕಾಮಗಾರಿಗಳಿಗೆ ಜೆ ಸಿ ಬಿ ಯಂತ್ರವನ್ನು ಬಳಸಲೂ ಅವಕಾಶವಿದೆ ಎಂಬುದನ್ನು ಅಧಿಕಾರಿಗಳ ಗಮನಕ್ಕೆ ತಂದರು.

## ಹೊರ ರಾಜ್ಯಕ್ಕೆ ಮೇವು ಸಾಗಣೆಗೆ ತಡೆ

ಪ್ರಸ್ತುತ ಮುಂದಿನ ಮೂರು ವಾರಗಳಿಗೆ ಅಗತ್ಯವಾದ ಮೇವು ದಾಸ್ತಾನು ಲಭ್ಯವಿದೆ. ಆದರೆ, ಜಿಲ್ಲೆಗಳಿಂದ ಇತರೆ ರಾಜ್ಯಗಳಿಗೆ ಮೇವು ಸಾಗಣೆ ರಾಜ್ಯದ ಜಾನುವಾರುಗಳ ಆಹಾರಕ್ಕೆ ಸಮಸ್ಯೆಯನ್ನು ತಂದೊಡ್ಡಲಿದೆ. ಈ ಹಿನ್ನೆಲೆಯಲ್ಲಿ ಹೊರ ರಾಜ್ಯಗಳಿಗೆ ಮೇವು ಸಾಗಣೆಯನ್ನು ತಡೆಗಟ್ಟಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಸಿದ್ದರಾಮಯ್ಯ ಅವರು ಸೂಚಿಸಿದರು. ಜಿಲ್ಲೆಯಲ್ಲಿನ ಜಾನುವಾರು ಸಂಖ್ಯೆ, ಮೇವು ಲಭ್ಯತೆ  ಹಾಗೂ ಮೇವಿನ ಅಗತ್ಯ ಕುರಿತ ಅಂದಾಜು ಪಟ್ಟಿ ಸಿದ್ಧಪಡಿಸಿ ಮೇವು ಬೆಳೆಯಲು ಪ್ರೋತ್ಸಾಹ ನೀಡುವಂತೆ ಅವರು ಜಿಲ್ಲಾಡಳಿತಗಳಿಗೆ ಸಲಹೆ ಮಾಡಿದರು. ಪ್ರತಿ ವಿಧಾನ ಸಭಾ ಕ್ಷೇತ್ರವಾರು ಕಾರ್ಯಪಡೆ ರಚಿಸಲಾಗಿದೆ. ಈಗಾಗಲೇ ಬರಪೀಡಿತ ಪ್ರದೇಶಗಳಿಗೆ 60 ಲಕ್ಷ ರೂ ಹಾಗೂ ಬರಪೀಡಿತವಲ್ಲದ ಪ್ರದೇಶಗಳಿಗೆ 40 ಲಕ್ಷ ರೂ ಬಿಡುಗಡೆ ಮಾಡಲಾಗಿದೆ ಎಂದರು.

## ಖಾಸಗೀ ಕೊಳವೆ ಬಾವಿಗಳು ಸರ್ಕಾರದ ವಶಕ್ಕೆ

ಕುಡಿಯುವ ನೀರು ಸರಬರಾಜಿಗೆ ಅತ್ಯಾಧ್ಯತೆ ನೀಡಬೇಕಿರುವ ಹಿನ್ನೆಲೆಯಲ್ಲಿ ಬರದ ಪ್ರದೇಶಗಳಲ್ಲಿರುವ ಖಾಸಗೀ ಕೊಳವೆ ಬಾವಿಗಳನ್ನು ಸರ್ಕಾರದ ವಶಕ್ಕೆ ತೆಗೆದು ಕೊಂಡು ಗ್ರಾಮೀಣ ಭಾಗದ ಜನರಿಗೆ ನೀರು ಪೂರೈಕೆ ಮಾಡಲು ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದ ಸಿದ್ದರಾಮಯ್ಯ ಅವರು ಕೊಳವೆ ಬಾವಿಗಳಿಂದ ಬೆಳೆ ಬೆಳೆಯಲು ನಿರ್ಬಂಧ ವಿಧಿಸಬೇಕೆಂದು ಆದೇಶಿಸಿದರು. ಈ ಬಗ್ಗೆ ತಮಗಿರುವ ಅಧಿಕಾರ ವ್ಯಾಪ್ತಿಯನ್ನು ಜಿಲ್ಲಾಡಳಿತಗಳು ಸಮರ್ಥವಾಗಿ ಬಳಸಿಕೊಳ್ಳಬೇಕು ಎಂದು ಅವರು ಕಿವಿಮಾತು ಹೇಳಿದರು.

## ಜಲ ಸಂಗ್ರಹಾಗಾರ ನಿರ್ಮಿಸಿ

ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಪಿ ಡಿ ಖಾತೆಗಳಲ್ಲಿ 247 ಕೋಟಿ ರೂ ಅನುದಾನ ಲಭ್ಯವಿದೆ. ನೀರಿನ ಇಳುವರಿಯನ್ನು ಆಧರಿಸಿ, ಗ್ರಾಮದಲ್ಲಿರುವ ಜನಸಂಖ್ಯೆಯನ್ನು ಗಮನದಲ್ಲಿರಿಸಿಕೊಂಡು ಕೊಳವೆ ಬಾವಿಗಳನ್ನು ಕೊರೆಸಲು ವಿವೇಚನೆಗೆ ಅನುಗುಣವಾಗಿ ಬಳಸಿ ಈ ಅನುದಾನವನ್ನು ಬರ ಪರಿಹಾರ ಕಾಮಗಾರಿಗಳಿಗೆ ಸದುಪಯೋಗ ಮಾಡಿ. ಎಲ್ಲೂ ಕುಡಿಯುವ ನೀರಿನ ಸಮಸ್ಯೆ ಉಂಟಾಗಬಾರದು. ಶಾಶ್ವತ ಪರಿಹಾರಕ್ಕೆ ಕ್ರಮ ಕೈಗೊಳ್ಳಬೇಕು. ರಾಜ್ಯದಲ್ಲಿ ಈಗಾಗಲೇ 35 ಗೋಶಾಲೆಗಳನ್ನು ತೆರೆಯಲಾಗಿದೆ. ಅಲ್ಲದೆ, 86 ಮೇವು ಬ್ಯಾಂಕ್‌ಗಳನ್ನು ಸ್ಥಾಪಿಸಲಾಗಿದೆ. ಜನ ಜಾನುವಾರು ರಕ್ಷಣೆಗೆ ತುರ್ತಾಗಿ 225 ಕೋಟಿ ರೂ ಅನುದಾನದ ಅಗತ್ಯ ವಿದೆ. ಪ್ರತಿ ಗ್ರಾಮದಲ್ಲೂ ಮಹಾತ್ಮ ಗಾಂಧೀ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ ಜಲ ಸಂಗ್ರಹಾಗಾರ ನಿರ್ಮಾಣ ಮಾಡುವತ್ತ ಜಿಲ್ಲಾಡಳಿತಗಳು ಮುಂದಾಗಬೇಕೆಂದು ಮುಖ್ಯಮಂತ್ರಿ ಆಶಿಸಿದರು.

## ಗುಳೆ ಹೋಗದಂತೆ ತಡೆಯಿರಿ

ಕೇಂದ್ರ ಸರ್ಕಾರವು ಮಹಾತ್ಮ ಗಾಂಧೀ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯಡಿ 100 ಮಾನವ ದಿನಗಳಿಗೆ ಬದಲಾಗಿ 150 ಮಾನವ ದಿನಗಳು ಉದ್ಯೋಗ ಒದಗಿಸಲು ಅವಕಾಶ ಕಲ್ಪಿಸಿದೆ. ಇದರಿಂದ ರಾಜ್ಯದಲ್ಲಿ ಆರು ಕೋಟಿ ಮಾನವ ದಿನಗಳ ಬದಲಾಗಿ ಹತ್ತು ಕೋಟಿ ಮಾನವ ದಿನಗಳ ಉದ್ಯೋಗಾವಕಾಶಗಳು ಸೃಷ್ಟಿಯಾಗಿದೆ. ಆದಕಾರಣ, ಜನರಿಗೆ ಉದ್ಯೋಗ ಒದಗಿಸಿ ಗುಳೆ ಹೋಗುವುದನ್ನು ತಡೆಯಿರಿ ಎಂದು ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

### ಸಂಪುಟ ಉಪ ಸಮಿತಿಗಳಿಂದ ಮತ್ತೆ ಪರಿಶೀಲನೆ

ಬರ ಪರಿಹಾರ ಕಾಮಗಾರಿಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಈಗಾಗಲೇ ರಚಿಸಲಾಗಿರುವ ನಾಲ್ಕು ಸಂಪುಟ ಉಪ ಸಮಿತಿಗಳು ಬರ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಮತ್ತೆ ಪರಿಶೀಲನೆ ನಡೆಸಲಿದೆ ಎಂದು ಸಿದ್ದರಾಮಯ್ಯ ಅವರು ಮಾಹಿತಿ ನೀಡಿದರು.

ಕಂದಾಯ ಸಚಿವ ಕಾಗೋಡು ತಿಮ್ಮಪ್ಪ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಹೆಚ್. ಕೆ. ಪಾಟೀಲ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ. ಆರ್. ರಮೇಶ್ ಕುಮಾರ್ ಅವರೂ ಸೇರಿದಂತೆ ಸಚಿವ ಸಂಪುಟದ ಸದಸ್ಯರು ಈ ಸಮ್ಮೇಳನದಲ್ಲಿ ಹಾಜರಿದ್ದರು.

## ಭೀಕರ ಬರಗಾಲದಲ್ಲೂ ಜನರು ಗುಳೆ ಹೋಗುವುದನ್ನು ತಡೆಗಟ್ಟಿದ ಅನ್ನಭಾಗ್ಯ : ಸಿದ್ದರಾಮಯ್ಯ

ರಾಜ್ಯಕ್ಕೆ ಎದುರಾಗಿರುವ ಭೀಕರ ಬರಗಾಲದಲ್ಲೂ ಜನರು ಗುಳೆ ಹೋಗುವುದನ್ನು ತಡೆಗಟ್ಟಿದ್ದು ಅನ್ನಭಾಗ್ಯ ಯೋಜನೆ ಎಂದು ಮುಖ್ಯಮಂತ್ರಿ ಇಲ್ಲಿ ಇಂದು ತಿಳಿಸಿದರು.

ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಎರಡು ದಿನಗಳ ಸಮ್ಮೇಳನವನ್ನು ಉದ್ದೇಶಿಸಿ ಅವರು ಮಾತನಾಡುತ್ತಿದ್ದರು.

### ಮಾನವೀಯ ಕಳಕಳಿ ಅರ್ಥ ಮಾಡಿಕೊಳ್ಳಿ

ರಾಜ್ಯದಲ್ಲಿ ಒಂದು ಕೋಟಿ ಎಂಟು ಲಕ್ಷ ಕುಟುಂಬಗಳಿಗೆ ನೆರವಾಗಿರುವ ಅನ್ನಭಾಗ್ಯ ಯೋಜನೆಯಲ್ಲಿ ನುಸುಳಿರುವ ಅನರ್ಹರನ್ನು ಹೊರ ಹಾಕಲು ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಕೆಲವು ಕ್ರಮಗಳನ್ನು ಕೈಗೊಂಡಿರುವುದು ಸ್ವಾಗತಾರ್ಹ. ಆದರೆ, ಯೋಜನೆಯ ಲಾಭವನ್ನು ಅರ್ಹರಿಗೆ ದೊರಕಿಸಿಕೊಡುವುದು ಮೊದಲ ಆದ್ಯತೆಯಾಗಬೇಕು. ಅನರ್ಹರನ್ನು ಹೊರಹಾಕುವುದು ಎರಡನೇ ಆದ್ಯತೆಯಾಗಬೇಕು. ಯೋಜನೆಯ ಅನುಷ್ಠಾನಗೊಳಿಸುತ್ತಿರುವ ಅಧಿಕಾರಿಗಳು ಸರ್ಕಾರದ ಧೋರಣೆಯಲ್ಲಿನ ಈ ಮಾನವೀಯ ಕಳಕಳಿಯನ್ನು ಅರ್ಥ ಮಾಡಿಕೊಳ್ಳಬೇಕು ಎಂದರು.

ಇತ್ತೀಚೆಗೆ ತಾವು ಮೈಸೂರು ಜಿಲ್ಲೆಯ ಪ್ರಗತಿ ಪರಿಶೀಲನೆ ನಡೆಸಿದಾಗ, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ನಡೆಸುತ್ತಿರುವ ಪ್ರಯೋಗದಿಂದ 36,000 ಅರ್ಹ ಕುಟುಂಬಳಿಗೆ ಪಡಿತರ ಸೌಲಭ್ಯ ದೊರೆತಿಲ್ಲ ಎಂಬ ದೂರುಗಳು ಬಂದಿವೆ. ಆದಕಾರಣ, ಅಧಿಕಾರಿಗಳು ಅನರ್ಹ ಫಲಾನುಭವಿಗಳನ್ನು ತೆಗೆದು ಹಾಕುವುದಕ್ಕಿಂತಲೂ ಹೆಚ್ಚಾಗಿ ಅರ್ಹ ಫನಾನುಭವಿಗಳ ಹಿತ ಕಾಯ್ದುಕೊಳ್ಳಲು ಆದ್ಯ ಗಮನಹರಿಸಬೇಕು ಎಂದು ಸಲಹೆ ಮಾಡಿದರು.

ಪ್ರತೀ ತಿಂಗಳು ಬಡವರಿಗೆ ಉಚಿತವಾಗಿ ಆಹಾರ ಪದಾರ್ಥ ದೊರಕಬೇಕು. ಅನ್ನಭಾಗ್ಯ ಯೋಜನೆಗೆ ಸೇರ್ಪಡೆಯಾಗಲು ಅರ್ಹ ಫಲಾನುಭವಿಗಳಿಗೆ ನಿರಂತರ ಅವಕಾಶ ದೊರಕಿಸಿಕೊಡಬೇಕು.

ನೆರೆಯ ತಮಿಳು ನಾಡಿನಲ್ಲಿ ಅಡುಗೆ ಅನಿಲ ಸಂಪರ್ಕ ಹೊಂದಿರುವ ಪಡಿತರ ಕುಟುಂಬಗಳಿಗೆ ಎರಡು ಲೀಟರ್ ಹಾಗೂ ಅಡುಗೆ ಅನಿಲ ಸಂಪರ್ಕ ಇಲ್ಲದ ಪಡಿತರ ಕುಟುಂಬಗಳಿಗೆ ನಾಲ್ಕು ಲೀಟರ್ ಸೀಮೆ ಎಣ್ಣೆ ನೀಡಲಾಗುತ್ತಿದೆ. ಕೇಂದ್ರ ಸರ್ಕಾರದ ಸೂಚನೆಯ ಮುನ್ನವೇ ಪಡಿತರ ವಿತರಣಾ ವ್ಯವಸ್ಥೆಯಲ್ಲಿ ಸೀಮೆ ಎಣ್ಣೆ ವಿತರಣೆ ಸ್ಥಗಿತಗೊಳಿಸಿದ್ದು ಸರಿಯಲ್ಲ. ಇದರಿಂದ ಕಡು ಬಡವರು ಹಾಗೂ ಬಡವರಿಗೆ ತೊಂದರೆಯಾಗುತ್ತದೆ ಎಂಬ ಎಚ್ಚರ ಅಧಿಕಾರಿಗಳಲ್ಲಿ ಇರಬೇಕು.

## ವಿಳಂಬ ದ್ರೋಹವೂ ಭ್ರಷ್ಟಾಚಾರವೇ !

ಆಹಾರ ವಿತರಣೆಯಲ್ಲಿ ಘಟಕ ವ್ಯವಸ್ಥೆ ಮಾಡಿರುವುದು ಸರಿಯಲ್ಲ. ಇದರಿಂದ ಅಗತ್ಯ ಪ್ರಮಾಣದಲ್ಲಿ ಆಹಾರ ಧಾನ್ಯ ಜನರಿಗೆ ದೊರಕುತ್ತಿಲ್ಲ. ಜನ–ಮನ ಕಾರ್ಯಕ್ರಮ ಹಾಗೂ ಜನ ಸಂಪರ್ಕ ಸಭೆಗಳಿಂದ ಎಲ್ಲಾ ಜಿಲ್ಲಾಧಿಕಾರಿಗಳು ಕಾಲಕಾಲಕ್ಕೆ ಜನ ಸಂಪರ್ಕ ಸಭೆಗಳನ್ನು ನಡೆಸಬೇಕು. ಇದರಿಂದ ಸರ್ಕಾರದ ಯೋಜನೆಗಳ ಬಗ್ಗೆ ಜನರ ಅಭಿಪ್ರಾಯ ಏನೆಂಬುದು ತಿಳಿಯುತ್ತದೆ. ಈ ವೇದಿಕೆಯಲ್ಲಿ ಹೊರಹೊಮ್ಮುವ ಜನರ ಅಭಿಪ್ರಾಯಗಳನ್ನು ಸರ್ಕಾರದ ಗಮನಕ್ಕೆ ತರುವುದು ಜಿಲ್ಲಾಡಳಿತಗಳ ಕರ್ತವ್ಯ. ಆಧುನಿಕ ತಂತ್ರಜ್ಞಾನ ನಮ್ಮಲ್ಲಿ ಲಭ್ಯವಿದೆ. ಅದನ್ನು ಬಳಕೆ ಮಾಡಿ. ಜನರ ಸಮಸ್ಯೆಗಳನ್ನು ಅರಿತು ಅವುಗಳನ್ನು ಪರಿಹಾರ ಮಾಡಿ. ಕೆಲವು ಜಿಲ್ಲೆಗಳಲ್ಲಿ ಸರ್ಕಾರದ ಕಾರ್ಯಚಟುವಟಿಕೆಗಳು ಸಮಾಧಾನಕರವಾಗಿ ನಡೆಯುತ್ತಿವೆ. ಇನ್ನೂ ಕೆಲವು ಜಿಲ್ಲೆಗಳಲ್ಲಿ ಸಮರ್ಪಕವಾಗಿ ನಡೆಯುತ್ತಿಲ್ಲ ಎಂಬ ದೂರುಗಳೂ ಇವೆ. ಲಂಚವೊಂದೇ ಭ್ರಷ್ಟಾಚಾರವಲ್ಲ. ವಿಳಂಬ ದ್ರೋಹವೂ ಭ್ರಷ್ಟಾಚಾರವೇ. ಜನರ ನೋವುಗಳಿಗೆ ಅಧಿಕಾರಿಗಳು ಕೂಡಲೇ ಸ್ಪಂದಿಸಬೇಕು ಎಂದು ಮುಖ್ಯಮಂತ್ರಿ ಹಿತ ನುಡಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ವಸತಿ ನಿಲಯಗಳಿಗೆ ಹಿರಿಯ ಅಧಿಕಾರಿಗಳು ಪದೇ ಪದೇ ಭೇಟಿ ನೀಡಿ, ವಸತಿ ನಿಯಲಗಳಲ್ಲಿ ಶುಚಿತ್ವ ಕಾಯ್ದುಕೊಳ್ಳಲಾಗಿದೆಯೇ ? ಮೆನೂ ಕಾರ್ಡ್‌ನಂತೆ ಗುಣಮಟ್ಟದ ಆಹಾರ ಪೂರೈಸಲಾಗುತ್ತಿದೆಯೇ ? ರಾಜ್ಯ ಸರ್ಕಾರವು ನೀಡುತ್ತಿರುವ ಅನುದಾನದ ಸದ್ಬಳಕೆಯಾಗುತ್ತಿದೆಯೇ ? ಎಂಬುದನ್ನು ಪರಿಶೀಲಿಸಬೇಕು. ವಿದ್ಯಾರ್ಥಿಗಳಿಗೆ ಅತ್ಯಾವಶ್ಯಕವಾಗಿ ಕಲ್ಪಿಸಲೇಬೇಕಾದ ಸೌಲಭ್ಯಗಳನ್ನು ಕಡ್ಡಾಯವಾಗಿ ಪರಿಶೀಲನೆ ಮಾಡಬೇಕು ಎಂದು ಮುಖ್ಯಮಂತ್ರಿ ಸೂಚಿಸಿದರು.

## ಅನಿರೀಕ್ಷಿತ ಭೇಟಿ ನೀಡಿ

ತಮ್ಮ ಸರ್ಕಾರವು ಅಧಿಕಾರಕ್ಕೆ ಬಂದ ಮೇಲೆ ವಸತಿ ನಿಲಯಗಳ ನಿರ್ವಹಣೆಗೆ ಒದಗಿಸುತ್ತಿರುವ ಅನುದಾನದಲ್ಲಿ ಗಣನೀಯ ಪ್ರಮಾಣದಲ್ಲಿ ಏರಿಕೆ ಮಾಡಲಾಗಿದೆ. ಮೆಟ್ರಿಕ್–ಪೂರ್ವ ವಸತಿ ನಿಲಯಗಳಲ್ಲಿ ಪ್ರತಿ ವಿದ್ಯಾರ್ಥಿಗೆ 1300 ರೂ ಡಯಟ್ ಚಾರ್ಜ್ ಹಾಗೂ ಮೆಟ್ರಿಕ್–ನಂತರದ ವಸತಿ ನಿಲಯಗಳಲ್ಲಿ ಪ್ರತಿ ವಿದ್ಯಾರ್ಥಿಗೆ 1400 ರೂ ಡಯಟ್ ಚಾರ್ಜ್ ನೀಡಲಾಗುತ್ತಿದೆ. ಅಲ್ಲದೆ, ವಸತಿ ನಿಲಯಗಳ ನಿರ್ವಹಣೆಗೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಪರಿಶೀಲನಾ ಸಮಿತಿಗಳಿವೆ. ಊಟ ಸೇರಿದಂತೆ ಸರ್ಕಾರವು ಒದಗಿಸುತ್ತಿರುವ ವಿವಿಧ ಸೌಲಭ್ಯಗಳ ಸಮರ್ಪಕ ಬಳಕೆ ಮತ್ತು ಸದುಪಯೋಗ ಕುರಿತು ಪರಿಶೀಲಿಸಬೇಕಾದದ್ದು ಅಧಿಕಾರಿಗಳು ಹಾಗೂ ಈ ಸಮಿತಿಗಳ ಕರ್ತವ್ಯವಲ್ಲವೇ ? ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ನಿರ್ವಹಣಾಧಿಕಾರಿಗಳು ಹಾಗೂ

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಕೂಡಲೇ ವಸತಿ ನಿಲಯಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಶುಚಿತ್ವ, ಆರೋಗ್ಯಕರ ವಾತಾವರಣ, ಶುದ್ಧ ಕುಡಿಯುವ ನೀರು, ಊಟ ಮತ್ತು ವಸತಿ ಸೌಲಭ್ಯಗಳನ್ನು ಪರಿಶೀಲನೆ ಮಾಡಿ ಸರ್ಕಾರಕ್ಕೆ ವರದಿ ಸಲ್ಲಿಸಬೇಕು ಎಂದು ಸಿದ್ದರಾಮಯ್ಯ ಅವರು ನಿರ್ದೇಶನ ನೀಡಿದರು.

ವಸತಿ ನಿಲಯಗಳಲ್ಲಿ ಮಕ್ಕಳ ಆರೋಗ್ಯ ಸುಧಾರಣೆ, ಪೌಷ್ಠಿಕ ಆಹಾರ ದೊರಕುವ ವ್ಯವಸ್ಥೆ ಸಮರ್ಪಕವಾಗಿರಲಿ. ಸತತ ಪರಿಶೀಲನೆ ಇದ್ದಾಗ ಮಾತ್ರ ವಸತಿ ನಿಲಯಗಳಲ್ಲಿ ಗುಣಮಟ್ಟದ ಸೌಲಭ್ಯಗಳು ವಿದ್ಯಾರ್ಥಿಗಳಿಗೆ ದೊರಕುತ್ತದೆ.

**ನಿವೇಶನ–ಭೂಮಿ ನೀಡಲು ಏನು ತೊಂದರೆ ?**

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ, ಹಿಂದುಳಿದ ವರ್ಗಗಳ ಹಾಗೂ ಅಲ್ಪ ಸಂಖ್ಯಾತರ ವಸತಿ ನಿಲಯಗಳ ಸ್ವಂತ ಕಟ್ಟಡ ನಿರ್ಮಾಣಕ್ಕೆ ಇನ್ನೂ ಕೆಲವೆಡೆಗಳಲ್ಲಿ ನಿವೇಶನಗಳಿಲ್ಲ, ಮತ್ತೆ ಕೆಲವೆಡೆ ಸ್ಮಶಾನಗಳಿಗೆ ಭೂಮಿ ಇಲ್ಲ. ಇವುಗಳಿಗೆ ಸರ್ಕಾರಿ ಜಾಗದಲ್ಲಿ ನಿವೇಶನ–ಭೂಮಿ ನೀಡಲು ಅಧಿಕಾರಿಗಳಿಗೆ ಏನು ತೊಂದರೆ ? ಎಂದು ಅಧಿಕಾರಿಗಳಿಗೆ ಪ್ರಶ್ನಿಸಿದ ಸಿದ್ದರಾಮಯ್ಯ ಅವರು ಮೇಲಿಂದ ಮೇಲೆ ಸೂಚಿಸಿದ ನಂತರವೂ ಡಾ ಅಂಬೇಡ್ಕರ್ ಭವನ ಹಾಗೂ ಬಾಬು ಜಗಜೀವನ್‌ರಾಮ್ ಸಮುದಾಯ ಭವನಗಳಿಗೆ ಜಮೀನು ನೀಡುತ್ತಿಲ್ಲ ಎಂಬ ದೂರುಗಳು ಕೇಳಿ ಬರುತ್ತಿವೆ. ಇಂತಹ ಪ್ರಕರಣಗಳನ್ನು ಇನ್ನು ಮುಂದೆ ಗಂಭೀರವಾಗಿ ಪರಿಗಣಿಸಲಾಗುವುದು ಎಂದರು.

**ಸರ್ಕಾರಿ ಜಮೀನು ಮಾಹಿತಿ ಪ್ರದರ್ಶನಾ ಫಲಕದಲ್ಲಿ ಪ್ರದರ್ಶಿಸಿ**

ಕಳೆದ ಸಭೆಯಲ್ಲಿ ಸೂಚಿಸಿದಂತೆ ಪ್ರತಿ ಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿವಿಧ ರೀತಿಯ ಸರ್ಕಾರಿ ಜಮೀನುಗಳು, ಗೋಮಾಳಗಳು ಎಷ್ಟಿವೆ ? ಎಂಬುದರ ವಿವರಗಳು ಲಭ್ಯವಿರಬೇಕು. ಇವೆಲ್ಲದರ ಮಾಹಿತಿಯನ್ನೂ ಗ್ರಾಮ ಪಂಚಾಯತ್ ಕಚೇರಿಯ ಪ್ರದರ್ಶನಾ ಫಲಕದಲ್ಲಿ ಪ್ರದರ್ಶಿಸಬೇಕು. ಸರ್ಕಾರಿ ಜಮೀನು ಒತ್ತುವರಿಯಾಗಿ ಅನಧಿಕೃತವಾಗಿ ಸಾಗುವಳಿಯಾಗುತ್ತಿದ್ದರೆ ಅದರ ಬಗ್ಗೆಯೂ ವಿವರಗಳು ಲಭ್ಯವಿರಬೇಕು. ಅಂತೆಯೇ, ಸಂಬಂಧಿತರ ವಿರುದ್ಧ ಕಾನೂನಿನಂತೆ ಕ್ರಮ ಜರುಗಿಸಬೇಕು. ನಗರ ಪ್ರದೇಶಗಳಲ್ಲಿಯೂ ಕಾನೂನು ಬಾಹಿರವಾಗಿ ಭೂ ಅತಿಕ್ರಮಣ ಮಾಡಿದ್ದರೆ ಪ್ರಕರಣ ದಾಖಲಿಸಿ ಕಾನೂನು ಕ್ರಮ ಜರುಗಿಸಬೇಕು. ಅನೇಕ ಸಂಘ ಸಂಸ್ಥೆಗಳಿಗೆ ಈಗಾಗಲೇ ನೀಡಿರುವ ಸರ್ಕಾರಿ ಜಮೀನು ಸದುಪಯೋಗವಾಗಿದೆಯೇ ? ಎಂಬ ಬಗ್ಗೆ ಪರಿಶೀಲನೆ ಅಗತ್ಯ. ಈ ನಿಟ್ಟಿನಲ್ಲಿ ಲೋಪವಾದರೆ ಸರ್ಕಾರ ಗಂಭೀರವಾಗಿ ಪರಿಗಣಿಸಲಿದೆ ಎಂದು ಮುಖ್ಯಮಂತ್ರಿ ಅಧಿಕಾರಿಗಳಿಗೆ ಎಚ್ಚರಿಸಿದರು.

ಅಲ್ಲದೆ, 2014–15 ರ ಆಯವ್ಯಯದಲ್ಲಿ ಘೋಷಿಸಲಾಗಿರುವಂತೆ ಸಮಾಜದಲ್ಲಿರುವ ಕುಷ್ಠರೋಗಿಗಳು, ಹೆಚ್ ಐ ವಿ ಪೀಡಿತರು, ದೇವದಾಸಿಗಳನ್ನು ಒಳಗೊಂಡಂತೆ 14 ವಿಶೇಷ ವರ್ಗದ ಜನರಿಗೆ 20,000 ಮನೆ ನಿರ್ಮಿಸಿ ಕೊಡಲು ಸೂಚಿಸಲಾಗಿತ್ತು. ಈ ವಿಶೇಷ ಜನರ ವಸತಿಗೆ ಜಿಲ್ಲೆಗಳಲ್ಲಿ ಆಧ್ಯತೆಯ ಮೇರೆಗೆ ನಿವೇಶನ ಮತ್ತು ಸೂರು ಒದಗಿಸಬೇಕಿದೆ. ಜಿಲ್ಲಾಡಳಿತಗಳು ಈ ನಿಟ್ಟಿನಲ್ಲಿ ಈ ಕೂಡಲೇ ಕಾರ್ಯೋನ್ಮುಖವಾಗಬೇಕು ಎಂದು ಸಿದ್ದರಾಮಯ್ಯ ಅವರು ಸೂಚನೆ ನೀಡಿದರು.

***********

ಡಿ ಪಿ ಎಂ : ಟಿ ಸಿ ಎಂ ಬಿ